All India Radio: Bangalore
National Bulletin In Kannada
11.01.2025 : 07.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

11.01.2025 : 07.35AM

***********

**ಮುಖ್ಯಾಂಶಗಳು:**

1. ಉಪರಾಷ್ಟ್ರಪತಿ ಜಗದೀಪ್ ಧನಕರ್ ಇಂದು ಕರ್ನಾಟಕ ಭೇಟಿ; ಬೆಂಗಳೂರಿನಲ್ಲಿ ಹಲವು ಕಾರ್ಯಕ್ರಮಗಳಲ್ಲಿ ಭಾಗಿ
2. ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮ ಪ್ರತಿಮೆಯ ಪ್ರತಿಷ್ಠಾಪನೆಯ ಮೊದಲನೇ ವಾರ್ಷಿಕೋತ್ಸವದ ಮೂರು ದಿನಗಳ ಸಂಭ್ರಮಾಚರಣೆ ಇಂದು ಆರಂಭ
3. ನವದೆಹಲಿಯಲ್ಲಿಂದು ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಕುರಿತ ಪ್ರಾದೇಶಿಕ ಸಮ್ಮೇಳನದ ಅಧ್ಯಕ್ಷತೆ ವಹಿಸಲಿರುವ ಕೇಂದ್ರ ಸಚಿವ ಅಮಿತ್ ಶಾ
4. ಮಲೇಷ್ಯಾ ಸೂಪರ್ ಥೌಸಂಡ್ ಬ್ಯಾಡ್ಮಿಂಟನ್ ಟೂರ್ನಿ; ಸೆಮಿಫೈನಲ್‌ನಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ - ಚಿರಾಗ್ ಶೆಟ್ಟಿ ಜೋಡಿ ಸೆಣಸು

************

ಉಪರಾಷ್ಟ್ರಪತಿ ಜಗದೀಪ್ ಧನಕರ್ ಬೆಂಗಳೂರಿಗೆ ಇಂದು ಒಂದು ದಿನದ ಅಧಿಕೃತ ಭೇಟಿ ನೀಡಲಿದ್ದಾರೆ. ರಾಜ್ಯ ಲೋಕಸೇವಾ ಆಯೋಗದ ಅಧ್ಯಕ್ಷರುಗಳ ೨೫ನೇ ರಾಷ್ಟ್ರೀಯ ಸಮಾವೇಶವನ್ನು ಅವರು ಉದ್ಘಾಟಿಸಲಿದ್ದಾರೆ. ಭೇಟಿಯ ಭಾಗವಾಗಿ ಅವರು, ಬಿಇಎಲ್‌ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಆನಂತರ ಬಿಎಚ್‌ಇಎಲ್‌ಗೆ ಭೇಟಿ ನೀಡಿ, ವಿಜ್ಞಾನಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

************

ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮ ಪ್ರತಿಮೆಯ ಪ್ರತಿಷ್ಠಾಪನೆಯ ಮೊದಲನೇ ವಾರ್ಷಿಕೋತ್ಸವದ ಸ್ಮರಣಾರ್ಥ ಉತ್ತರ ಪ್ರದೇಶದಲ್ಲಿ ಮೂರು ದಿನಗಳ ವೈಭವೋಪೇತ ಸಂಭ್ರಮಾಚರಣೆಗೆ ಇಂದು ಚಾಲನೆ ದೊರೆಯಲಿದೆ. ಕಳೆದ ವರ್ಷದ ಜನವರಿ ೨೨ರಂದು ಪ್ರಧಾನಿ ನರೇಂದ್ರ ಮೋದಿ, ರಾಮಜನ್ಮ ಭೂಮಿ ಮಂದಿರವನ್ನು ಉದ್ಘಾಟಿಸಿದರು. ಆದರೆ ಹಿಂದು ಪಂಚಾಂಗದ ಅನುಸಾರ ಪ್ರಾಣ ಪ್ರತಿಷ್ಠಾಪನಾ ಮಹೋತ್ಸವದ ವಾರ್ಷಿಕೋತ್ಸವ ಇಂದು ಆಚರಿಸಲಾಗುತ್ತಿದೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ರಾಮಲಲ್ಲಾಗೆ ವಿಶೇಷ ಅಭಿಷೇಕದ ಮೂಲಕ ಪೂಜೆ ಸಲ್ಲಿಸಲಿದ್ದಾರೆ.

**ಈ ಕುರಿತು ಒಂದು ವರದಿ:**

ರಾಮಲಲ್ಲಾ ಪ್ರಾಣ ಪ್ರತಿಷ್ಠೆಯ ಮೊದಲ ವಾರ್ಷಿಕೋತ್ಸವವನ್ನು ಆಚರಿಸಲು ಅಯೋಧ್ಯೆ ಸಜ್ಜಾಗಿದೆ. ಮೊದಲ ದಿನ, ರಾಮಲಲ್ಲಾ ಚಿನ್ನ ಮತ್ತು ಬೆಳ್ಳಿಯಿಂದ ನೇಯ್ದ ವಿಶೇಷವಾಗಿ ತಯಾರಿಸಿದ ಪೀತಾಂಬರಿ ಉಡುಪನ್ನು ಧರಿಸಲಿದ್ದಾರೆ. ಸುಮಾರು ೧೧೦ ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಶ್ರೀ ರಾಮ ಮಂದಿರ ಟ್ರಸ್ಟ್ ತಿಳಿಸಿದೆ. ಅಂಗದ್ ತಿಲಾದಲ್ಲಿ ೫,೦೦೦ ಜನರಿಗೆ ಆತಿಥ್ಯ ವಹಿಸುವ ಸಾಮರ್ಥ್ಯವಿರುವ ಜರ್ಮನ್ ಹ್ಯಾಂಗರ್ ಟೆಂಟ್ ಅನ್ನು ಸ್ಥಾಪಿಸಲಾಗಿದೆ, ಅಲ್ಲಿ

ಸಾರ್ವಜನಿಕರು ಸಾಂಸ್ಕೃತಿಕ ಪ್ರದರ್ಶನಗಳು, ದೈನಂದಿನ ಆಚರಣೆಗಳು, ಮಂಟಪ ಮತ್ತು ಯಜ್ಞಶಾಲೆಯಲ್ಲಿ ನಡೆಯುವ ರಾಮ ಕಥಾ ಪ್ರವಚನಗಳು ಸೇರಿದಂತೆ ಇತರ ಭವ್ಯ ಕಾರ್ಯಕ್ರಮಗಳನ್ನು ವೀಕ್ಷಿಸಬಹುದು.

************

ನವದೆಹಲಿಯಲ್ಲಿಂದು ನಡೆಯುವ ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಸಂಬಂಧಿಸಿದ ಪ್ರಾದೇಶಿಕ ಸಮ್ಮೇಳನದ ಅಧ್ಯಕ್ಷತೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ವಹಿಸಲಿದ್ದಾರೆ. ಮಾದಕದ್ರವ್ಯ ನಿಯಂತ್ರಣ ಸಂಸ್ಥೆ - ಎನ್‌ಸಿಬಿ ಈ ಸಮ್ಮೇಳನವನ್ನು ಆಯೋಜಿಸಿದ್ದು, ಹೆಚ್ಚುತ್ತಿರುವ ಮಾದಕದ್ರವ್ಯ ಕಳ್ಳಸಾಗಣೆ ಮತ್ತು ರಾಷ್ಟ್ರೀಯ ಭದ್ರತೆ ಮೇಲೆ ಅದರ ಪರಿಣಾಮದ ಕುರಿತು ಸಮ್ಮೇಳನ ಕೇಂದ್ರೀಕರಿಸಿದೆ.ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಅಮಿತ್ ಶಾ, ಮಾದಕದ್ರವ್ಯ ವಿಲೇವಾರಿ ಪಾಕ್ಷಿಕ ಅಭಿಯಾನಕ್ಕೆ ಚಾಲನೆ ನೀಡಲಿದ್ದು, ಇದೇ ವೇಳೆ ಎನ್‌ಸಿಬಿಯ ಭೂಪಾಲ್ ವಲಯ ಘಟಕದ ನೂತನ ಕಚೇರಿ ಸಂಕೀರ್ಣವನ್ನು ಉದ್ಘಾಟಿಸಲಿದ್ದಾರೆ ಹಾಗೂ ಎಲ್ಲಾ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಅನುವಾಗುವ 'ಮಾನಸ್-೨' ಸಹಾಯವಾಣಿಯ ವಿಸ್ತರಣೆಗೂ ಚಾಲನೆ ನೀಡಲಿದ್ದಾರೆ.

************

ರಾಷ್ಟ್ರೀಯ ಯುವ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯ ಭಾರತ ಮಂಟಪದಲ್ಲಿ ನಾಳೆ ನಡೆಯಲಿರುವ ವಿಕಸಿತ ಭಾರತ್ ಯುವ ನಾಯಕರ ಸಂವಾದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ದೇಶದ ಶ್ರೇಷ್ಠ ಆಧ್ಯಾತ್ಮಿಕ ನಾಯಕರಲ್ಲಿ ಒಬ್ಬರಾದ ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆ ಸ್ಮರಣಾರ್ಥ ಆಚರಿಸಲಾಗುವ ಯುವ ದಿನಾಚರಣೆಯ ಸಂದರ್ಭದಲ್ಲಿ ಪ್ರಧಾನಿ ದೇಶಾದ್ಯಂತ ಮೂರು ಸಾವಿರ ಯುವ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ವೇಳೆ ಅವರು, ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವ ಯುವ ನಾಯಕರು ಹತ್ತು ಆಯ್ದ ವಿಷಯಗಳ ಮೇಲೆ ಬರೆದ ಅತ್ಯುತ್ತಮ ಲೇಖನಗಳ ಸಂಕಲನವನ್ನು ಬಿಡುಗಡೆಗೊಳಿಸಲಿದ್ದಾರೆ. ತಂತ್ರಜ್ಞಾನ, ಸುಸ್ಥಿರತೆ, ಮಹಿಳಾ ಸಬಲೀಕರಣ, ಉತ್ಪಾದನೆ ಹಾಗೂ ಕೃಷಿ ಆಯ್ದ ಕೆಲವು ವಿಷಯಗಳಾಗಿವೆ. ಬಳಿಕ ಪ್ರಧಾನಿ ಯುವ ನಾಯಕರೊಂದಿಗೆ ಔತಣಕೂಟದಲ್ಲಿ ಪಾಲ್ಗೊಳ್ಳಲಿದ್ದು, ಇದು ವಿಚಾರ, ಅನುಭವ ಮತ್ತು ಆಕಾಂಕ್ಷೆಗಳನ್ನು ಪರಸ್ಪರ ವಿನಿಮಯ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಿದೆ. ಈ ಸಂವಾದ ಕಾರ್ಯಕ್ರಮ, ರಾಜಕೀಯ ಹಿನ್ನೆಲೆ ಇಲ್ಲದಿರುವ ಒಂದು ಲಕ್ಷ ಯುವಕರನ್ನು ರಾಜಕೀಯದಲ್ಲಿ ತೊಡಗಿಕೊಳ್ಳುವಂತೆ ಮಾಡುವ ಪ್ರಧಾನಿಮಂತ್ರಿ ಅವರ ದೃಷ್ಟಕೋನದೊಂದಿಗೆ ಹೊಂದಿಕೆಯಾಗುತ್ತದೆ.

************

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ನಿನ್ನೆ ಗುರ್ನಸಿಯಲ್ಲಿ ನಡೆದ ಕಾಮನ್‌ವೆಲ್ತ್ ರಾಷ್ಟ್ರಗಳ ಸ್ಪೀಕರ್‌ಗಳು ಮತ್ತು ಅಧ್ಯಕ್ಷರ ಸಮ್ಮೇಳನದ ಸ್ಥಾಯಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಮಾತನಾಡಿದ ಬಿರ್ಲಾ ಅವರು, ಕೃಷಿ, ಫಿನ್‌ಟೆಕ್ ಮತ್ತು ಕೃತಕ ಬುದ್ಧಿಮತ್ತೆ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಭಾರತವು ಬೃಹತ್ ಪರಿವರ್ತನೆಗೆ ಸಾಕ್ಷಿಯಾಗುತ್ತಿದೆ ಎಂದು ಹೇಳಿದರು.ಹವಾಮಾನ ಬದಲಾವಣೆ, ಭಯೋತ್ಪಾದನೆ ಮತ್ತು ಸೈಬರ್ ಅಪರಾಧದಂತಹ ಜಾಗತಿಕ ಸವಾಲುಗಳನ್ನು ಎದುರಿಸಲು ಸಂಸತ್ತುಗಳನ್ನು ಹೆಚ್ಚು ಪರಿಣಾಮಕಾರಿ, ಎಲ್ಲರನ್ನೂ ಒಳಗೊಳ್ಳುವ ಮತ್ತು ಪಾರದರ್ಶಕವಾಗಿಸುವ ಮಹತ್ವವನ್ನು ಅವರು ಎತ್ತಿ ಹೇಳಿದರು. ಉತ್ತಮ ಆಡಳಿತವನ್ನು ಬೆಳೆಸಲು ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಉತ್ತೇಜಿಸಲು ಸಂಸದೀಯ ಸಂಸ್ಥೆಗಳನ್ನು ಹೆಚ್ಚು ಪರಿಣಾಮಕಾರಿ, ಎಲ್ಲರನ್ನೂ ಒಳಗೊಳ್ಳುವ ಮತ್ತು ಪಾರದರ್ಶಕವಾಗಿಸುವ ಮಹತ್ವವನ್ನು ಲೋಕಸಭಾ ಸ್ಪೀಕರ್ ಅವರು ಪ್ರಸ್ತಾಪಿಸಿದರು.

************

ದೆಹಲಿ ವಿಧಾನಸಭಾ ಚುನಾವಣೆಗೆ ನಿನ್ನೆ ಅಧಿಸೂಚನೆ ಹೊರಡಿಸಲಾಗಿದ್ದು, ನಾಮಪತ್ರ ಸಲ್ಲಿಕೆಯ ಮೊದಲನೇ ದಿನ ಒಟ್ಟು ೯ ಅಭ್ಯರ್ಥಿಗಳು ವಿವಿಧ ವಿಧಾನಸಭಾ ಕ್ಷೇತ್ರಗಳಿಂದ ನಾಮಪತ್ರ ಸಲ್ಲಿಸಿದ್ದಾರೆ. ಏತನ್ಮಧ್ಯೆ, ವಿವಿಧ ರಾಜಕೀಯ ಪಕ್ಷಗಳು ತಮ್ಮ ಅಭ್ಯರ್ಥಿಗಳ ಪರ ಪ್ರಚಾರ ಬಿರುಸುಗೊಳಿಸಿದೆ. ಬಿಜೆಪಿಯ ಪರ್ವೇಶ್ ವರ್ಮಾ ನಿನ್ನೆ ದೆಹಲಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರಚಾರ ಕೈಗೊಂಡರೆ, ಕಾಂಗ್ರೆಸ್‌ನ ಸಂದೀಪ್ ದೀಕ್ಷಿತ್, ಆಮ್ ಆದ್ಮಿ ಪಕ್ಷದ ನಾಯಕಿ ಹಾಗೂ ದೆಹಲಿ ಮುಖ್ಯಮಂತ್ರಿ ಅತಿಷಿ ಕೂಡ ಪ್ರಚಾರ ಕೈಗೊಂಡರು. ನವದೆಹಲಿಯಲ್ಲಿ ನಿನ್ನೆ ಚುನಾವಣೆಗೆ ಅಭ್ಯರ್ಥಿಗಳನ್ನು ಅಂತಿಮಗೊಳಿಸಲು ಬಿಜೆಪಿಯ ಕೇಂದ್ರ ಚುನಾವಣಾ ಸಮಿತಿ ಸಭೆ ನಡೆಸಿದೆ. ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಕೇಂದ್ರ ಸಚಿವ ಅಮಿತ್ ಶಾ ಮತ್ತಿತರರು ಉಪಸ್ಥಿತರಿದ್ದರು.

************

೨೦೪೭ ರೊಳಗೆ ವಿಕಸಿತ ಭಾರತ ನಿರ್ಮಾಣದ ನಿಟ್ಟಿನಲ್ಲಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಬೇಕಿದೆ. ಸಾಮಾಜಿಕ ನ್ಯಾಯ ಹಾಗೂ ಜಾತ್ಯತೀತವಾಗಿ ಸರ್ಕಾರದ ಎಲ್ಲಾ ಯೋಜನೆಗಳು ಶೇಕಡ ೧೦೦ ರಷ್ಟು ತಲುಪಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕರ್ನಾಟಕ ಮೂಲದ ಖಾಸಗಿ ಉದ್ಯಮಿ ನಿಖಿಲ್ ಕಾಮತ್ ಅವರೊಂದಿಗಿನ ಸಂದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ರಾಜಕೀಯದಲ್ಲಿ ಯಶಸ್ವಿಯಾಗಲು ಉತ್ತಮ ನಾಯಕರಾಗಿರಬೇಕು. ಸಮರ್ಪಣಾ ಭಾವ ಹಾಗೂ ಬದ್ಧತೆಯನ್ನು ಹೊಂದಿರಬೇಕು. ಅಷ್ಟೇ ಅಲ್ಲದೆ ಜನರಿಗೆ ಸುಲಭವಾಗಿ ಲಭ್ಯರಿರಬೇಕು ಎಂದರು. ಇದು ತಂತ್ರಜ್ಞಾನ ಚಾಲಿತ ಶತಮಾನವಾಗಿದೆ, ನಾವಿನ್ಯತೆಗಾಗಿ ದೇಶದಲ್ಲಿ ಹೊಸ ಆಯೋಗ ರಚಿಸಲಾಗಿದ್ದು, ನಿಧಿಯನ್ನು ಸೃಷ್ಟಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

***ಧ್ವನಿ***ಪಿಎಂ

************

ನವದೆಹಲಿಯಲ್ಲಿ ನಿನ್ನೆ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಪ್ರಧಾನಮಂತ್ರಿ ಅವರ ಮಾರ್ಗದರ್ಶನ ಹಾಗೂ ಪ್ರೇರಣೆಯೊಂದಿಗೆ ಈ ಬಾರಿಯ ಪ್ರಯಾಗ್‌ರಾಜ್‌ನ ಮಹಾಕುಂಭಮೇಳ ಒಂದು ಹೆಮ್ಮೆಯ ಸಂಕೇತವಾಗಲಿದೆ. ಈ ಉತ್ಸವ ನವಭಾರತದ ದಿವ್ಯ, ಭವ್ಯ ಹಾಗೂ ಡಿಜಿಟಲ್ ರೂಪವನ್ನು ಅನಾವರಣಗೊಳಿಸಲಿದೆ ಎಂದಿದ್ದಾರೆ.ಮಹಾಕುಂಭಮೇಳ ಇದೇ ೧೩ರಂದು ಆರಂಭವಾಗಿ ಫೆಬ್ರವರಿ ೨೬ರಂದು ಕೊನೆಗೊಳ್ಳಲಿದೆ.

************

ಒಡಿಶಾದ ಭುವನೇಶ್ವರದ ಜನತಾ ಮೈದಾನದಲ್ಲಿ ನಿನ್ನೆ ನಡೆದ ೧೮ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಿದ್ದರು. ಈ ವೇಳೆ ಅವರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ೨೭ ಅನಿವಾಸಿ ಭಾರತೀಯ ಸದಸ್ಯರಿಗೆ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.  ಬಳಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ವಿದೇಶಗಳಲ್ಲಿ ನೆಲೆಸಿರುವ ಭಾರತೀಯರು ಕೇವಲ ಜ್ಞಾನ ಮತ್ತು ಕೌಶಲ್ಯಗಳನ್ನು ಮಾತ್ರವಲ್ಲದೆ, ದೇಶದ ಅಡಿಪಾಯವಾಗಿರುವ ಮೌಲ್ಯಗಳನ್ನು ಸಾರಿದ್ದಾರೆ. ದೇಶ ವಿಕಸಿತ ಭಾರತದ ಗುರಿಯೆಡೆಗೆ ಸಾಗುತ್ತಿರುವ ಸಂದರ್ಭದಲ್ಲಿ ಈ ಗುರಿಯ ಸಾಕಾರಕ್ಕೆ ಅನಿವಾಸಿ ಭಾರತೀಯರು ಸೇರಿದಂತೆ ಎಲ್ಲಾ ಭಾರತೀಯರ ಕ್ರಿಯಾಶೀಲ ಭಾಗವಹಿಸುವಿಕೆಯ ಅಗತ್ಯವಿದೆ ಎಂದರು. ವೈದ್ಯಕೀಯ ಮತ್ತು ತಂತ್ರಜ್ಞಾನ ಸೇರಿದಂತೆ ಎಲ್ಲಾ

ಕ್ಷೇತ್ರಗಳಲ್ಲಿಯೂ ಅನಿವಾಸಿ ಭಾರತೀಯರು ಉತ್ತಮ ಸಾಧನೆ ಮಾಡಿದ್ದಾರೆ ಎಂದರು. ರಾಷ್ಟ್ರಪತಿಗಳು 'ಒಡಿಶಾ ಮಂಟಪ' ಸೇರಿದಂತೆ ವಿವಿಧ ಮಳಿಗೆಗಳಿಗೆ ಭೇಟಿ ನೀಡಿದರು.

************

ಸ್ವಾವಲಂಬನೆ ಮತ್ತು ತಾಂತ್ರಿಕ ಸಹಯೋಗಗಳನ್ನು ಬೆಳೆಸುವ ಮೂಲಕ ದೃಢವಾದ ರಕ್ಷಣಾ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ರಚಿಸಲು ಸರ್ಕಾರವು ಪರಿವರ್ತನಾತ್ಮಕ ನೀತಿ ಸುಧಾರಣೆಗಳನ್ನು ಕೈಗೊಳ್ಳುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಏರೋ ಇಂಡಿಯಾ ೨೦೨೫ ಕ್ಕೆ ಪೂರ್ವಭಾವಿಯಾಗಿ ನವದೆಹಲಿಯಲ್ಲಿ ನಿನ್ನೆ ನಡೆದ ರಾಯಭಾರಿಗಳ ದುಂಡು ಮೇಜಿನ ಸಭೆಯಲ್ಲಿ ಮಾತನಾಡಿದ ಅವರು, ನಾಲ್ಕನೇ ತಲೆಮಾರಿನ ಯುದ್ಧ ವಿಮಾನಗಳು, ಪರಮಾಣು ಜಲಾಂತರ್ಗಾಮಿ ನೌಕೆಗಳು, ಪ್ರಮುಖ ಯುದ್ಧ ಟ್ಯಾಂಕ್‌ಗಳು ಮತ್ತು ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಉತ್ಪಾದಿಸುವ ಸಾಮರ್ಥ್ಯವಿರುವ ಆಯ್ದ ರಾಷ್ಟ್ರಗಳ ಗುಂಪಿನಲ್ಲಿ ಭಾರತ ಈಗ ಸೇರಿದೆ ಎಂದರು. ಸಿ-೨೯೫ ವಿಮಾನ ಉತ್ಪಾದನಾ ಘಟಕದ ಸ್ಥಾಪನೆಯು ರಕ್ಷಣೆಯಲ್ಲಿ ಅಂತಾರಾಷ್ಟ್ರೀಯ ಸಹಯೋಗವನ್ನು ಬೆಳೆಸುವ ದೇಶದ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು. ಹೊಸ ಉದ್ಯಮಗಳು ಮತ್ತು ಪಾಲುದಾರಿಕೆಗಳನ್ನು ಬಯಸುವ ವಿದೇಶಿ ಕಂಪನಿಗಳಿಗೆ ಭಾರತೀಯ ಏರೋಸ್ಪೇಸ್ ಮತ್ತು ರಕ್ಷಣಾ ವಲಯವು ಗಮನಾರ್ಹ ಅವಕಾಶಗಳನ್ನು ಒದಗಿಸುತ್ತದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರತಿಪಾದಿಸಿದರು.

************

ಕೌಲಲಾಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಸೂಪರ್ ಥೌಸಂಡ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಸೆಮಿಫೈನಲ್‌ನಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ದಕ್ಷಿಣ ಕೊರಿಯಾದ ಜೋಡಿಯನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧.೪೦ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ಜೋಡಿ, ಮಲೇಷ್ಯಾ ಜೋಡಿಯನ್ನು ೨೬-೨೪, ೨೧-೧೫ ಸೆಟ್‌ಗಳಿಂದ ಮಣಿಸಿ, ಸೆಮಿಫೈನಲ್ ಪ್ರವೇಶಿಸಿತು.

************

ರೂರ್ಕೆಲಾದಲ್ಲಿ ನಿನ್ನೆ ನಡೆದ ಹಾಕಿ ಇಂಡಿಯಾ ಲೀಗ್ ಪಂದ್ಯದಲ್ಲಿ ತಮಿಳುನಾಡು ಡ್ರ್ಯಾಗನ್ಸ್ ತಂಡ ಶ್ರಾಚಿ ರಾರ್ ಬೆಂಗಾಲ್ ಟೈಗರ್ಸ್ ತಂಡವನ್ನು ೨-೧ ಗೋಲುಗಳ ಅಂತರದಿಂದ ಮಣಿಸಿದೆ. ಈ ಮೂಲಕ ತಮಿಳುನಾಡು ತಂಡ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಇಂದು ನಡೆಯುವ ಪಂದ್ಯದಲ್ಲಿ ಹೈದರಾಬಾದ್ ತೂಫಾನ್ಸ್ ತಂಡ ಸೂರ್ಮ ಹಾಕಿ ಕ್ಲಬ್ ತಂಡವನ್ನು ಎದುರಿಸಲಿದ್ದು, ಪಂದ್ಯ ಭಾರತೀಯ ಕಾಲಮಾನ ಸಂಜೆ ೬ ಗಂಟೆಗೆ ಆರಂಭವಾಗಲಿದೆ.

************

ಗುಜರಾತ್‌ನ ರಾಜ್‌ಕೋಟ್‌ನಲ್ಲಿ ನಡೆಯುತ್ತಿರುವ ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಮಹಿಳಾ ಏಕದಿನ ಕ್ರಿಕೆಟ್ ಸರಣಿಯಲ್ಲಿ ನಿನ್ನೆ ನಡೆದ ಮೊದಲ ಪಂದ್ಯದಲ್ಲಿ ಐರ್ಲೆಂಡ್ ತಂಡದ ವಿರುದ್ಧ ಭಾರತ ವನಿತಾ ತಂಡ ೬ ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಐರ್ಲೆಂಡ್ ತಂಡ, ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೩೮ ರನ್ ಗಳಿಸಿತು. ಗುರಿ ಬೆನ್ನತ್ತಿದ ಭಾರತ ವನಿತಾ ತಂಡ, ೩೪.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೪೧ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಈ ಮೂಲಕ ಸರಣಿಯಲ್ಲಿ ಭಾರತ ೧-೦ ಅಂತರದ ಮುನ್ನಡೆ ಸಾಧಿಸಿದೆ.

******END******